**3 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ**

**C.C. No. 2571 /2022**

**CW- 2** **PW: 2**

| | | |
|---|---|---|
| ಸಾಕ್ಷಿಯ ಹೆಸರು | : | ಆಸಿಫ ಕಲಾದಗಿ |
| ತಂದೆ /ಗಂಡನ ಹೆಸರು | : | ನಿಸಾರಅಹಮದ |
| ವಯಸ್ಸು | : | 34 ವರ್ಷ |
| ಉದ್ಯೋಗ | : | ಕೂಲಿ ಕೆಲಸ |
| ವಾಸಸ್ಥಳ | : | ನಂದಿಶ್ವರ ನಗರ ,ನವನಗರ. ಹುಬ್ಬಳ್ಳಿ. |

**ದಿಃ 15.04.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ ಎ.ಪಿ.ಪಿ. ಯವರಿಂದ ಃ**

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿ ಸದರಿ ದಾಖಲೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆಯು ಸ್ಥಳ ಪಂಚನಾಮೆಯನ್ನು ಅದನ್ನು ನಿಪಿ 3 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ 3 ಎ ಎಂದು ಗುರುತಿಸಲಾಯಿತು. ನಿಪಿ 3 ರಲ್ಲಿರುವ ನನ್ನ ಸಹಿಯನ್ನು ಯಾವ ದಿನಾಂಕ ಮತ್ತು ಸ್ಥಳ ಮತ್ತು ಸಮಯದಲ್ಲಿ ಮಾಡಿರುತ್ತೇನೆ ಎಂದು ಈಗ ನನಗೆ ನೆನಪಿಲ್ಲ. ಸಾಕ್ಷಿಯು ನಿಪಿ 2 ಛಾಯಾಚಿತ್ರದಲ್ಲಿ ತನ್ನನ್ನು ನೋಡಿ ಗುರುತಿಸಿರುತ್ತಾರೆ ನಿಪಿ 2 ನ್ನು ಯಾವ ಕಾರಣಕ್ಕೆ ತೆಗೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ನಿಪಿ 3 ರ ಸಮಯದಲ್ಲಿ ನನ್ನ ಜೊತೆ ಯಾರು ಸಹಿ ಮಾಡಿರುತ್ತಾರೆಂದು ಈಗನನಗೆ ನೆನಪಿಲ್ಲ.

**(ಈ ಹಂತದಲ್ಲಿ ಮಾನ್ಯ ಎ.ಪಿ.ಪಿ. ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಎ.ಪಿ.ಪಿ. ಯವರಿಂದಃ**

ದಿನಾಂಕ 19-10-2022 ರಂದು ಬೆಳಿಗ್ಗೆ 8-00 ರಿಂದ 9-00 ಗಂಟೆರವರೆಗೆ ಚಾಸಾ 1 ರವರು ತೋರಿಸಿದ ಸ್ಥಳದಲ್ಲಿ ತನಿಖಾಧಿಕಾರಿ ನನ್ನ ಮತ್ತು ಚಾಸಾ 3 ರವರ ಸಮಕ್ಷಮ ಸ್ಥಳ ಪಂಚನಾಮೆಯನ್ನು ಮಾಡಿ ನನ್ನ ಸಹಿ ಪಡೆದುಕೊಂಡಿರುತ್ತಾರೆಂದರೆ ಸರಿಯಲ್ಲ. ನಿಪಿ 3 ರ ಸಮಯದಲ್ಲಿ ನಿಪಿ 2 ರಂತೆ

ಛಾಯಾಚಿತ್ರ ತೆಗಯಲಾಗಿತ್ತು ಎಂದರೆ ಸರಿಯಲ್ಲ. ನಿಪಿ  2 ಮತ್ತು 3 ರ ವಿಚಾರ ನನಗೆ ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ  ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರುವಿಚಾರಣೆ ಇಲ್ಲ.**

(ನನ್ನ ಉಕ್ತಲೇಖದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೆ ಸರಿ ಇದೆ.

**(ಶ್ರೀಮತಿ ಶರ್ಮಿಳ ಕಾಮತ್ ಕೆ)**
**3 ನೇ ಅಧಿಕ ಹಿ.ದಿ.ನ್ಯಾ.ಹುಬ್ಬಳ್ಳಿ.**